# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ

**"ಸಾರಿಗೆ ಭವನ" ಕೇಂದ್ರ ಕಛೇರಿ, ಕೆ.ಹೆಚ್.ರಸ್ತೆ, ಶಾಂತಿ ನಗರ, ಬೆಂಗಳೂರು-560 027.**

**ಸಂಚಾರ (ವಾಣಿಜ್ಯ) ಇಲಾಖೆ,**

---

**ಸಂ:ಕರಾಸಾ:ಕೇಕ:ಸಂ:ಸಿ2:1507(ಭಾಗ-7):282 :2022-23 ದಿನಾಂಕ: 14.05.2022**

ಎಲ್ಲಾ ಹಿರಿಯ / ವಿಭಾಗೀಯ ನಿಯಂತ್ರಣಾಧಿಕಾರಿಗಳು,
ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ.

ಮಾನ್ಯರೇ,

ವಿಷಯ: 2022-23ನೇ ಸಾಲಿನಲ್ಲಿ ವಿದ್ಯಾರ್ಥಿ ಬಸ್ ಪಾಸ್ ಮಾನ್ಯತೆ ಬಗ್ಗೆ.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ 16.05.2022 ರಿಂದ 2022-23ನೇ ಸಾಲಿನ ಭೌತಿಕ ತರಗತಿಗಳು ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಶಾಲೆಗಳು ಆರಂಭಗೊಳ್ಳುತ್ತಿದೆ.

ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿ ಪಾಸು ಪಡೆಯಲು ಕಾಲಾವಕಾಶ ನೀಡುವ ಸಲುವಾಗಿ 2021-22ನೇ ಸಾಲಿನಲ್ಲಿ ಪಡೆದಿರುವ ವಿದ್ಯಾರ್ಥಿ ಬಸ್ ಪಾಸುಗಳು ಜೂನ್ 30, 2022 ರವರೆಗೆ ಮಾನ್ಯತಾ ಅವಧಿ ಇರುವುದರಿಂದ ಇದೇ ಪಾಸುಗಳನ್ನು ಬಳಸಿ ಕರಾರಸಾ ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಪ್ರಯಾಣಿಸಲು ಅವಕಾಶ ಕಲ್ಪಿಸುವುದು.

ಮುಂದುವರೆದು, ಹೊಸ ಬಸ್ ಪಾಸುಗಳ ವಿತರಣಾ ದಿನಾಂಕವನ್ನು ಶೀಘ್ರದಲ್ಲಿ ತಿಳಿಸಲಾಗುವುದು. ತದನಂತರ, ವಿದ್ಯಾರ್ಥಿಗಳು ನಿಯಮಾನುಸಾರ ಉಚಿತ / ರಿಯಾಯಿತಿ ಪಾಸುಗಳನ್ನು ಪಡೆಯಲು ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ವಿಭಾಗಗಳ ವ್ಯಾಪ್ತಿಯಲ್ಲಿ ವ್ಯಾಪಕ ಪ್ರಚಾರದೊಂದಿಗೆ ಪಾಸುಗಳನ್ನು ಪಡೆಯಲು ತಿಳಿಸುವಂತೆ ಕೋರಲಾಗಿದೆ.

ಈ ಬಗ್ಗೆ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ತಪ್ಪದೇ ಮಾಹಿತಿ ಒದಗಿಸಲು ಕ್ರಮಕೈಗೊಂಡು ಯಾವುದೇ ದೂರುಗಳಿಗೆ ಅವಕಾಶ ನೀಡದಂತೆ ಕ್ರಮವಹಿಸಲು ಹಾಗೂ ಈ ಸಂಬಂಧ ಅನುಸರಣಾ ವರದಿಯನ್ನು ಕಳುಹಿಸಲು ಕೋರಲಾಗಿದೆ.

ತಮ್ಮ ವಿಶ್ವಾಸಿ,

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)

✓ಪ್ರತಿಯನ್ನು ವಂದನಾಪೂರ್ವಕವಾಗಿ:

1. ಮಾನ್ಯ ಅಧ್ಯಕ್ಷರು, / ಮಾನ್ಯ ಉಪಾಧ್ಯಕ್ಷರು, ಕರಾರಸಾ ನಿಗಮ, ರವರ ಆಪ್ತ ಕಾರ್ಯದರ್ಶಿಗಳು, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
2. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು (ಸಿ&ಜಾ) ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
3. ಮುಖ್ಯ ಸಂಚಾರ ವ್ಯವಸ್ಥಾಪಕರು (ಕಾ), ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಅಗತ್ಯ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
4. ಮುಖ್ಯ ಸಂಚಾರ ವ್ಯವಸ್ಥಾಪಕರು, ವಾಕರಸಾ ಸಂಸ್ಥೆ / ಕಕರಸಾ ನಿಗಮ, ಕೇಂದ್ರ ಕಛೇರಿ, ಹುಬ್ಬಳ್ಳಿ / ಕಲಬುರ್ಗಿ ರವರ ಮಾಹಿತಿಗಾಗಿ ಹಾಗೂ ಅಗತ್ಯ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
5. ಎಲ್ಲಾ ಇಲಾಖಾ ಮುಖ್ಯಸ್ಥರು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)